ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 22ನೇ ಸೆಪ್ಟೆಂಬರ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

–

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

ದಿನಾಂಕ: 15.09.2022ರ ಈ–D ಸಮೂಹದ 4ನೇ ಪಟ್ಟಿಯಿಂದ ತಡೆಹಿಡಿಯಲಾದ

1) ಡಾ. ವೈ. ಭರತ್ ಶೆಟ್ಟಿ, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 46(803) 2) ಶ್ರೀ ಹೆಚ್.ಪಿ. ಮಂಜುನಾಥ್, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:50(812) 3) ಶ್ರೀಮತಿ ರೂಪಾಲಿ ಸಂತೋಷ್ ನಾಯ್ಕ್, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:54(787)	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಕೆ. ರಘುಪತಿ ಭಟ್ (ಅಧ್ಯಕ್ಷರು, ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿ) ಅವರು ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿಯ ಹದಿಮೂರನೇ ವರದಿಯನ್ನೊಪ್ಪಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಮತ್ತು ನಾಲ್ಕನೇ ಪಟ್ಟಿ ರೀತ್ಯಾ.

4. ವಿತ್ತೀಯ ಕಾರ್ಯಕಲಾಪಗಳು

2022–23ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

... 2/

5. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕದ ಪರ್ಯಾಲೋಚನೆ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೆಂಕಟರಾವ್ ನಾಡಗೌಡ, ಡಿ.ಸಿ. ತಮ್ಮಣ್ಣ, ಎಂ. ಅಶ್ವಿನ್ ಕುಮಾರ್, ಎಲ್.ಎನ್. ನಿಸರ್ಗನಾರಾಯಣಸ್ವಾಮಿ, ಕೆ. ಮಹದೇವ ಹಾಗೂ ಇತರರು** – ಬಿ.ಎಂ.ಎಸ್. ಶಿಕ್ಷಣ ಸಂಸ್ಥೆಯ ಟ್ರಸ್ಟಿಗಳ ನೇಮಕ ಹಾಗೂ ಸಂಸ್ಥೆಯ ಅಧೀನದಲ್ಲಿರುವ ಕಾಲೇಜುಗಳ ವಿವಿಧ ಹುದ್ದೆಗಳ ನೇಮಕಾತಿ, ಪ್ರವೇಶ ಪ್ರಕ್ರಿಯೆ, ಶಿಕ್ಷಣ ಶುಲ್ಕ ವಸೂಲಾತಿ ಹಾಗೂ ಜಮೀನಿನಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

2) **ಶ್ರೀಯುತರುಗಳಾದ ಪಿ.ಟಿ. ಪರಮೇಶ್ವರ ನಾಯಕ್, ಪ್ರಿಯಾಂಕ ಖರ್ಗೆ ಹಾಗೂ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಇವರುಗಳು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಅನುದಾನವನ್ನು ವಿಶೇಷ ಅನುದಾನ ನೆಪದಲ್ಲಿ ಪ್ರಭಾವಿ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

3) **ಶ್ರೀಯುತರುಗಳಾದ ಜೆ.ಎನ್. ಗಣೇಶ, ಪ್ರಿಯಾಂಕ ಖರ್ಗೆ, ಕೆ. ರಾಘವೇಂದ್ರ ಬಸವರಾಜ ಹಿಟ್ನಾಳ್, ಎಲ್.ಎನ್. ನಿಸರ್ಗನಾರಾಯಣಸ್ವಾಮಿ, ರಿಜ್ವಾನ್ ಅರ್ಷದ್, ಅನಿಲ್ ಚಿಕ್ಕಮಾದು ಹಾಗೂ ಇತರರು** – ಪರಿಶಿಷ್ಟ ಪಂಗಡ ಜಾತಿಗೆ 7.5 ಮೀಸಲಾತಿ ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

4) **ಶ್ರೀಯುತರುಗಳಾದ ದೊಡ್ಡನಗೌಡ ಜಿ. ಪಾಟೀಲ್, ವೀರಭದ್ರಯ್ಯ ಚರಂತಿಮಠ, ಬಸನಗೌಡ ರಾಮನಗೌಡ ಪಾಟೀಲ (ಯತ್ನಾಳ), ಸಿದ್ದು ಸವದಿ, ಡಿ.ಎಸ್. ಸುರೇಶ್ ಮತ್ತು ಅಭಯ ಪಾಟೀಲ ಇವರುಗಳು** – ರಾಜ್ಯದಲ್ಲಿನ ಹನಿ ನೀರಾವರಿ ಯೋಜನೆಗಳ ಸಾಧಕ ಮತ್ತು ಬಾಧಕಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

... 3/

5) **ಶ್ರೀಯುತರುಗಳಾದ ಸಿದ್ದರಾಮಯ್ಯ, ಯು.ಟಿ. ಅಬ್ದುಲ್ ಖಾದರ್, ಕೆ.ಆರ್. ರಮೇಶ್ ಕುಮಾರ್, ಕೃಷ್ಣ ಬೈರೇಗೌಡ, ಈಶ್ವರ್ ಭೀಮಣ್ಣ ಖಂಡ್ರೆ, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ ಹಾಗೂ ಇತರರು** – ರಾಜ್ಯದಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ನೀಡಿರುವ ಅನುದಾನದಲ್ಲಿ ಶೇ. 40ಕ್ಕಿಂತ ಹೆಚ್ಚಿನ ಭ್ರಷ್ಟಾಚಾರ ನಡೆಯುತ್ತಿರುವ ಕುರಿತು ಗುತ್ತಿಗೆದಾರರ ಸಂಘದವರು ಮಾಡಿರುವ ಗಂಭೀರ ಆರೋಪದ ಬಗ್ಗೆ ಮತ್ತು **ಶ್ರೀಯುತರುಗಳಾದ ಪಿ. ರಾಜೀವ್, ಎಂ.ಪಿ. ಅಪ್ಪಚ್ಚು ರಂಜನ್, ಎ.ಎಸ್. ಜಯರಾಮ (ಮಸಾಲಾ ಜಯರಾಮ) ಹಾಗೂ ದಿನಕರ ಕೇಶವ ಶೆಟ್ಟಿ ಇವರುಗಳು** – 2018 ನೇ ಸಾಲಿಗೂ ಹಿಂದಿನ ಅವಧಿಯಲ್ಲಿ ನಡೆದಿರುವ ಹಗರಣಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ ಅವರು** – ಉಡುಪಿ ಜಿಲ್ಲೆಯಲ್ಲಿರುವ ಒಂದೇ ಮೆಡಿಕಲ್ ಕಾಲೇಜು ಆಸ್ಪತ್ರೆಯವರು ಆಯುಷ್ಮಾನ್ ಭಾರತ್ ಯೋಜನೆಗೆ ಸೀಮಿತ ಬೆಡ್‌ಗೆ ಮಂಜೂರಾತಿ ಪಡೆದುಕೊಂಡಿರುವುದರಿಂದ ಹೆಚ್ಚಿನ ಬಡರೋಗಿಗಳು ಈ ಯೋಜನೆಯಲ್ಲಿ ಚಿಕಿತ್ಸೆಯನ್ನು ಪಡೆಯಲು ವಂಚಿತರಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು** – ಗೌರಿಬಿದನೂರಿನ ನಗರಸಭೆಯ ವ್ಯಾಪ್ತಿಯಲ್ಲಿ ಕರ್ನಾಟಕ ಗೃಹ ಮಂಡಳಿಯ ವತಿಯಿಂದ ನಿರ್ಮಿಸಿರುವ ಮನೆಗಳಲ್ಲಿ 55 ವರ್ಷಗಳಿಂದ ವಾಸಿಸುತ್ತಿರುವವರಿಗೆ ಕುಣಿಗಲ್ ಮತ್ತು ಕೆ.ಜಿ.ಎಫ್ ಮತ್ತಿತರ ಕಡೆಗಳಲ್ಲಿ ಸರ್ಕಾರ ನಿಗದಿಪಡಿಸಿರುವ ದರದಲ್ಲಿ ಹಸ್ತಾಂತರ ಮಾಡಿರುವ ರೀತಿಯಲ್ಲಿಯೇ ಹಂಚಿಕೆ ಮಾಡುವ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

3) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿಯಲ್ಲಿ ಐಟಿ ಪಾರ್ಕ್/ಸೆಮಿ ಕಂಡಕ್ಟರ್ ಪಾರ್ಕ್ ನಿರ್ಮಾಣ ಮಾಡಲು ಕೇಂದ್ರ ರಕ್ಷಣಾ ಇಲಾಖೆಯ ವಶದಲ್ಲಿರುವ ಜಮೀನು ಹಸ್ತಾಂತರ ವಿಚಾರದಲ್ಲಿ ವಿಳಂಬವಾಗುತ್ತಿರುವುದರಿಂದ ಉತ್ತರ ಕರ್ನಾಟಕ ಹಾಗೂ ರಾಜ್ಯದಲ್ಲಿ ಐಟಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಕುಂಠಿತವಾಗಿದ್ದು, ನಿರುದ್ಯೋಗಿಗಳ ಸಂಖ್ಯೆ ಹೆಚ್ಚಾಗುತ್ತಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ದಿನಕರ ಕೇಶವ ಶೆಟ್ಟಿ ಅವರು** – ಜಮೀನನ್ನು ಉಳುಮೆ ಮಾಡುವ ರೈತರಿಗೆ ಭೂ ಒಡೆತನಕ್ಕಾಗಿ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಅವಕಾಶ ನೀಡಿದರೂ ಸಹ ಅರ್ಜಿ ಸಲ್ಲಿಸದೇ ವಂಚಿತರಾಗಿರುವ ರೈತರಿಗೆ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀಮತಿ ರೂಪಕಲಾ ಎಂ. ಅವರು** – ಕೆ.ಜಿ.ಎಫ್. ಕ್ಷೇತ್ರಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಬಿಡುಗಡೆಯಾದ ಅನುದಾನದ ಬಗ್ಗೆ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದ ಜನವಸತಿ ಪ್ರದೇಶದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕೈಗೊಂಡ ಕ್ರಮದ ಬಗ್ಗೆ ಮತ್ತು ಸ್ಮಶಾನ ಅಭಿವೃದ್ಧಿಗೆ ಬಿಡುಗಡೆ ಮಾಡಲಾದ ಅನುದಾನದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

... 4/

6) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದ ಬಹುತೇಕ ಕರಾವಳಿ ವಲಯಗಳನ್ನು ಸಿ.ಆರ್.ಝೆಡ್.–3 ವಲಯದಲ್ಲಿ ಪರಿಗಣಿಸಿದ್ದು, ಇದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದರಿಂದ ಸಿ.ಆರ್.ಝೆಡ್. – 2 ವಲಯಕ್ಕೆ ಮಾರ್ಪಾಡುಗೊಳಿಸಿ ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ ಅನೇಕ ವರ್ಷಗಳಿಂದ ಬಂಗಾಲಿ ಪುನರ್ ವಸತಿ ಕ್ಯಾಂಪ್‌ಗಳಲ್ಲಿ ವಾಸಿಸುತ್ತಿರುವ ಬಂಗಾಲಿ ಜನರಿಗೆ ಸಿಟಿಜನ್‌ಶಿಪ್ ಅಮೆಂಡ್‌ಮೆಂಟ್ ಆ್ಯಕ್ಟ್ ಆದೇಶ ನೀಡಿದ್ದರೂ ಸಹ, ಅವರುಗಳಿಗೆ ಸಿಟಿಜನ್‌ಶಿಪ್ ನೀಡದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ಮಂಗಳೂರು ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಖರೀದಿಸಲಾಗಿರುವ ಲ್ಯಾಪ್‌ಟಾಪ್‌ಗಳ ಖರೀದಿ ಮತ್ತು ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಿನ ಹುದ್ದೆಗಳನ್ನು ನೇಮಕ ಮಾಡುವುದು ಸೇರಿದಂತೆ ನಡೆದಿರುವ ಅವ್ಯವಹಾರಗಳಿಗೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಇತ್ತೀಚಿನ ದಿನಗಳಲ್ಲಿ ಶುಂಠಿಯ ದರವು ಗಣನೀಯವಾಗಿ ಕುಸಿದ ಪರಿಣಾಮ ಅರಸೀಕೆರೆ ವಿಧಾನಸಭಾ ಕ್ಷೇತ್ರದ ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವುದರಿಂದ ಶುಂಠಿಗೆ ಬೆಂಬಲ ಬೆಲೆ ನೀಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

10) **ಶ್ರೀ ಆರ್. ನರೇಂದ್ರ ಅವರು** – ಹನೂರು ವಿಧಾನಸಭಾ ಕ್ಷೇತ್ರದ ಹೂಗ್ಯಂ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಳ್ಳಿಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾಡಲು ಅರಣ್ಯ ಪ್ರದೇಶದಲ್ಲಿ ಕಳಪೆ ಗುಣಮಟ್ಟದ ಕೇಬಲ್ ವೈರ್ ಅಳವಡಿಸಿರುವ ಕೇಬಲ್ ಸುಟ್ಟು ಹೋಗಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿರುವುದರಿಂದ ರೈತರ ವ್ಯವಸಾಯಕ್ಕೆ ಹಾಗೂ ಜನ ಜಾನುವಾರುಗಳ ಕುಡಿಯುವ ನೀರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು** – ರಾಜ್ಯದಲ್ಲಿ ನಗರಸಭೆ ಸರಹದ್ದಿನಿಂದ 3 ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿನ ಬಗರ್‌ಹುಕುಂ ಸಾಗುವಳಿದಾರರಿಗೆ ಅನುಕೂಲವಾಗುವಂತೆ ಸರ್ಕಾರದ ಸುತ್ತೋಲೆಯನ್ನು ಪುನರ್ ಪರಿಶೀಲಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12) **ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು** – ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ತುರ್ತು ಕುಡಿಯುವ ನೀರಿನ ಅನುಷ್ಠಾನಕ್ಕಾಗಿ ಕೊರೆದಿರುವ ಕೊಳವೆ ಬಾವಿಗಳಿಗೆ ಟಾಸ್ಕ್ ಫೋರ್ಸ್ ಅಡಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

13) **ಶ್ರೀ ಭೀಮಾ ನಾಯಕ್ ಎಲ್.ಬಿ.ಪಿ. ಅವರು** – ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 10 ಕೆರೆಗೆ ನೀರು ತುಂಬಿಸುವ ಯೋಜನೆಯನ್ನು ಪರಿಷ್ಕರಿಸಿ, 17 ಕೆರೆಗೆ ನೀರು ತುಂಬಿಸುವ ಯೋಜನೆಗೆ ಯೋಜನಾ ವರದಿಯೊಂದಿಗೆ ಸಲ್ಲಿಸಿರುವ ಪ್ರಸ್ತಾವನೆಯ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

... 5/

14) **ಶ್ರೀ ಕೆ.ವೈ. ನಂಜೇಗೌಡ ಅವರು** – ರಾಜ್ಯದಲ್ಲಿನ ಹಾಲು ಉತ್ಪಾದಕರ ಹಿತದೃಷ್ಟಿಯಿಂದ ನಂದಿನಿ ಹಾಲಿನ ಮಾರಾಟ ದರವನ್ನು ಪರಿಷ್ಕರಣೆ ಮಾಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

15) **ಡಾ. ಅಜಯ ಧರ್ಮಸಿಂಗ್ ಅವರು** – ರಾಜ್ಯದಲ್ಲಿ ನಾಯ್ಕಡ ಮತ್ತು ನಾಯಕ ಪರ್ಯಾಯ ಪದಗಳಾದ ತಳವಾರ ಮತ್ತು ಪರಿವಾರ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

16) **ಡಾ. ಯತೀಂದ್ರ ಸಿದ್ದರಾಮಯ್ಯ ಮತ್ತು ಹೆಚ್.ಪಿ. ಮಂಜುನಾಥ್ ಅವರುಗಳು** – ರಾಜ್ಯದಲ್ಲಿ ಸುಮಾರು 18 ವರ್ಷಗಳಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಾಪಕ ಓದುಗ ಹಾಗೂ ವಿದ್ಯುತ್ ಬಿಲ್ ವಸೂಲಾತಿ ಮಾಡುವ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ವಿದ್ಯುತ್ ಪ್ರತಿನಿಧಿಗಳ ಕೆಲಸವನ್ನು ಖಾಯಂಗೊಳಿಸಿ, ವೇತನ ಹೆಚ್ಚಿಸಿ, ಇತರೆ ಭತ್ಯೆ ಹಾಗೂ ಪ್ರೋತ್ಸಾಹ ಧನವನ್ನು ನೀಡಿ, ಸುಭದ್ರ ಜೀವನಕ್ಕೆ ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

17) **ಶ್ರೀ ಈಶ್ವರ ಭೀಮಣ್ಣ ಖಂಡ್ರೆ ಅವರು** – ಮುಳುಗಡೆಯಿಂದ ಸಂತ್ರಸ್ತರಾದವರಿಗೆ ನ್ಯಾಯಾಲಯದ ತೀರ್ಪಿನ ಅನ್ವಯ ಗರಿಷ್ಠ ಪರಿಹಾರ ನೀಡಿರುವ ರೀತಿಯಲ್ಲಿಯೇ ಕಾರಂಜಾ ಜಲಾಶಯದಲ್ಲಿ ಭೂಮಿ ಮತ್ತು ಮನೆ ಕಳೆದುಕೊಂಡಿರುವ ಸಂತ್ರಸ್ತರಿಗೆ ಒಂದು ಬಾರಿಯ ವಿಶೇಷ ಪ್ಯಾಕೇಜ್, ಭೂಮಿಯ ಪರಿಹಾರ ನೀಡಿ ನ್ಯಾಯ ಸಮಾನತೆ ಕಾಪಾಡಲು ಹೆಚ್ಚಿನ ಪರಿಹಾರ ನೀಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

18) **ಶ್ರೀ ಬಸನಗೌಡ ದದ್ದಲ ಅವರು** – ಏಮ್ಸ್ ಸಂಸ್ಥೆಯನ್ನು ರಾಯಚೂರು ಜಿಲ್ಲೆಯಲ್ಲಿ ಸ್ಥಾಪಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

19) **ಶ್ರೀ ಸಿದ್ದು ಸವದಿ ಅವರು** – ತೆರದಾಳ ಮತಕ್ಷೇತ್ರದ ಮಹಾಲಿಂಗಪುರ ಪಟ್ಟಣವನ್ನು ತಾಲ್ಲೂಕನ್ನಾಗಿ ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

20) **ಶ್ರೀ ಹೆಚ್.ಡಿ. ರೇವಣ್ಣ, ಶ್ರೀ ವೆಂಕಟರಾವ ನಾಡಗೌಡ, ಶ್ರೀ ಕೆ.ಎಂ. ಶಿವಲಿಂಗೇಗೌಡ** ಮತ್ತು **ಇತರರು** – ರಾಜ್ಯದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ನೇಮಕಗೊಂಡಿರುವ 407 ಇಂಜಿನಿಯರುಗಳನ್ನು ಮಾತೃ ಇಲಾಖೆಯಾದ ಜಲಸಂಪನ್ಮೂಲ ಇಲಾಖೆಗೆ ಹಸ್ತಾಂತರಿಸದೇ ಲೋಕೋಪಯೋಗಿ ಇಲಾಖೆಯಲ್ಲಿ ಮುಂದುವರೆಸಿರುವುದರಿಂದ 2007 ರಿಂದೀಚೆಗೆ ಲೋಕೋಪಯೋಗಿ ಇಲಾಖೆಯಲ್ಲಿ ನೇಮಕಗೊಂಡಿರುವ ಸಹಾಯಕ ಇಂಜಿನಿಯರ್‌ಗಳ ಮುಂಬಡ್ತಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

21) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕು ವ್ಯಾಪ್ತಿಯ ವಾಣಿವಿಲಾಸ ಜಲಾಶಯದ ಹಿನ್ನೀರಿನ ವ್ಯಾಪ್ತಿಯಲ್ಲಿರುವ ಗ್ರಾಮಗಳಲ್ಲಿನ ಕೃಷಿ ಜಮೀನು/ತೋಟ/ಮನೆಗಳಿಗೆ ಪುನರ್ವಸತಿ ಕಲ್ಪಿಸುವ ಬಗ್ಗೆ ಹಾಗೂ ಸದರಿ ಗ್ರಾಮಗಳನ್ನು ಭೂಸ್ವಾಧೀನಗೊಳಿಸಿ ಶಾಶ್ವತ ಪರಿಹಾರ ನೀಡುವ ಬಗ್ಗೆ ಮತ್ತು ಜಲಾಶಯದಲ್ಲಿನ ಶೇಖರಣೆಯ ಎತ್ತರವನ್ನು ಕಡಿತಗೊಳಿಸಿ ಕ್ರಸ್ಟ್ ಗೇಟ್‌ಗಳನ್ನು ಅಳವಡಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

... 6/

22) **ಶ್ರೀ ಹೆಚ್.ಕೆ. ಪಾಟೀಲ ಅವರು** – ಗದಗ ಬೆಟಗೇರಿ ಅವಳಿ ನಗರಗಳಿಗೆ ನಿರಂತರ ನೀರು ಪೂರೈಕೆ ಮಾಡುವ ಯೋಜನೆಯನ್ನು ಜಾರಿಗೊಳಿಸಲು ವಿಳಂಬವಾಗಿರುವುದರಿಂದ ನಾಗರಿಕರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

23) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ಬಸವನಬಾಗೇವಾಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮನಗೂಳಿ ಮತ್ತು ಗೊಳಸಂಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತ್ಯೇಕವಾಗಿ ಪರೀಕ್ಷಾ ಕೇಂದ್ರಗಳನ್ನು ತೆರೆಯುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎಸ್. ರಾಮಪ್ಪ ಅವರು – ಶಾಲಾ ಕಟ್ಟಡಗಳ ದುರಸ್ತಿ ಬಗ್ಗೆ ದಿನಾಂಕ: 14.09.2022 ರಂದು ನಾಲ್ಕನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 58(500)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm